**<u>ಸಾಕ್ಷಿಯನ್ನು ಇಂದು ದಿ.21.10.2024 ರಂದು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು</u>**
**<u>ಪಾಟೀ ಸವಾಲುಃ ಶ್ರೀ.ಎಸ್.ಎಸ್.ಜಿ., ವಿಶೇಷ ಸರಕಾರಿ ವಕೀಲರಿಂದ ಎದುರುದಾರರ ಪರವಾಗಿಃ</u>**

1) ನನ್ನ ಜಮೀನು ಸರ್ವೆ ನಂ.19/1A1, 19/1A2, 19/1B, 19/2 (19) ಇದ್ದು, ಅದು ಒಟ್ಟು 04 ಎಕರೆ 02 ಗುಂಟೆ ಜಮೀನು ಇದ್ದು, ಅದರಲ್ಲಿ 36 ಗುಂಟೆ ಜಮೀನು ಸ್ವಾಧೀನಗೊಂಡಿರುತ್ತದೆ.

2) **ನಾನು ಈ ಪ್ರಕರಣವಲ್ಲದೇ ಬೇರೆ ಯಾವುದೇ ನ್ಯಾಯಾಲಯದಲ್ಲಿ ನನ್ನ ಸ್ವಾಧೀನಗೊಂಡ ಜಮೀನಿಗೆ ಸಂಬಂದಿಸಿದಂತೆ ಹೆಚ್ಚುವರಿ ಪರಿಹಾರ ಕೋರಿ ಅರ್ಜಿಯನ್ನು ಸಲ್ಲಿಸಿರುವದಿಲ್ಲ.**

3) ನನ್ನ ಸಾಕ್ಷ್ಯ ಪ್ರಮಾಣ ಪತ್ರದಲ್ಲಿ ಬರೆದ ಸಂಗತಿಗಳು ಮತ್ತು ನಾನು ನ್ಯಾಯಾಲಯದಲ್ಲಿ ಹಾಜರುಪಡಿಸಿದ ದಾಖಲೆಗಳ ಬಗ್ಗೆ ನನಗೆ ಮಾಹಿತಿ ಇಲ್ಲ ಎಂದರೆ ಸರಿಯಲ್ಲ. ನನ್ನ ಜಮೀನು ಸ್ವಾಧೀನಪಡಿಸಿಕೊಳ್ಳುವ ಪೂರ್ವದಲ್ಲಿ ನನಗೆ ನೋಟಿಸನ್ನು ನೀಡಿರುತ್ತಾರೆ ಎಂದರೆ ಸರಿ. ನೋಟಿಸ ಜಾರಿ ಮಾಡಿದ ನಂತರ ಅಧಿಕಾರಿಗಳು ಬಂದು ಜಂಟಿ ಸರ್ವೆ ಮಾಡಿರುತ್ತಾರೆ ಎಂದರೆ ಸರಿ. ಉಪನೋಂದಣಾಧಿಕಾರಿಗಳ ಕಛೇರಿಯಲ್ಲಿ ಅರೇ ಮುರಾಳ ಗ್ರಾಮಕ್ಕೆ ನಿಗದಿಮಾಡಿದ ಬೆಲೆಯನ್ನು ನಮಗೆ ಕೊಟ್ಟಿರುತ್ತಾರೆ ಎಂದರೆ ಸರಿಯಲ್ಲ.

4) ಹೆಚ್ಚಿನ ಪರಿಹಾರ ಕೋರಿ ಅರ್ಜಿಯನ್ನು ಸಲ್ಲಿಸಿದ ದಿನಾಂಕ ನೆನಪಿಲ್ಲ. ಅರ್ಜಿಯನ್ನು ನಾನು ಸರಿಯಾದ ಸಮಯದಲ್ಲಿ ಸಲ್ಲಿಸಿಲ್ಲ ಎಂದರೆ ಸರಿಯಲ್ಲ.

5) ನನ್ನ ಜಮೀನು ಸಂಪೂರ್ಣ ಒಣಬೇಸಾಯದ ಜಮೀನು ಎಂದರೆ ಸರಿ.

6) ನನ್ನ ಸಾಕ್ಷ್ಯ ಪ್ರಮಾಣ ಪತ್ರದ ಪ್ಯಾರಾ ನಂ.5 ರಲ್ಲಿ ಹೇಳಿರುವ ಸಂಗತಿಗಳನ್ನು ಸಾಬೀತುಪಡಿಸಲು ಎ.ಪಿ.ಎಮ್.ಸಿಯಿಂದಾಗಲಿ ಅಥವಾ ಬೇರೆ ಯಾವುದೇ ದಾಖಲೆ ಹಾಜರುಪಡಿಸಿಲ್ಲ.

7) ನಿ.ಪಿ.2 ರಿಂದ 11 ನಾಲತವಾಡ, ಶಿರೋಳ, ಮದರಿ ಮತ್ತು ಬಿದರಕುಂದಿ ಗ್ರಾಮಗಳ ಖರೀದಿ ಪತ್ರಗಳು ಮತ್ತು ಖರಿದಿ ಕರಾರು ಪತ್ರಗಳು ಇದ್ದು, ಸದರಿ ಖರೀದಿ ಪತ್ರಗಳು ಯಾರಿಗೆ ಸಂಬಂಧಪಟ್ಟಿದ್ದು, ಯಾವ ಉದ್ದೇಶಕ್ಕೆ ಖರೀದಿ ಆಗಿರುತ್ತದೆ, ಎಷ್ಟು ಬೆಲೆಗೆ ಖರೀದಿಸಿರುತ್ತಾರೆ ಮತ್ತು ಸರ್ವೆ ನಂಬರ ಹೇಳಲು ಬರುವುದಿಲ್ಲ. ನಾಲತವಾಡ ಗ್ರಾಮದ ಖರೀದಿ ಪತ್ರದ ಜಮೀನಿಗೂ ಮತ್ತು ನನ್ನ ಜಮೀನಿಗೂ ಕನಿಷ್ಠ 15 ಕಿ.ಮೀ ಅಂತರ ಇದೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು 8-9 ಕಿ.ಮೀ ಅಂತರ ಇದೆ ಎಂದು ಸ್ವತಃ ಹೇಳುತ್ತಾರೆ. ಶಿರೋಳ ಗ್ರಾಮದ ಖರೀದಿ ಪತ್ರದ ಜಮೀನಿಗೂ ಮತ್ತು ನನ್ನ ಜಮೀನಿಗೂ ಕನಿಷ್ಠ 12 ಕಿ.ಮೀ ಅಂತರ ಇದೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು 5 ಕಿ.ಮೀ ಅಂತರ ಇದೆ ಎಂದು ಸ್ವತಃ ಹೇಳುತ್ತಾರೆ. ಮದರಿ ಗ್ರಾಮದ ಖರೀದಿ ಪತ್ರದ ಜಮೀನಿಗೂ ಮತ್ತು ನನ್ನ ಜಮೀನಿಗೂ ಕನಿಷ್ಠ 16 ಕಿ.ಮೀ ಅಂತರ ಇದೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು 9 ಕಿ.ಮೀ ಅಂತರ ಇದೆ ಎಂದು ಸ್ವತಃ ಹೇಳುತ್ತಾರೆ. ಬಿದರಕುಂದಿ ಗ್ರಾಮದ ಖರೀದಿ ಪತ್ರದ ಜಮೀನಿಗೂ ಮತ್ತು ನನ್ನ ಜಮೀನಿಗೂ ಕನಿಷ್ಠ 18 ಕಿ.ಮೀ ಅಂತರ ಇದೆ ಎಂದರೆ ಸರಿಯಲ್ಲ. ಸಾಕ್ಷಿಯು ಮುಂದುವರೆದು 9 ಕಿ.ಮೀ ಅಂತರ ಇದೆ ಎಂದು ಸ್ವತಃ ಹೇಳುತ್ತಾರೆ. ನನ್ನ ಜಮೀನಿಗೂ ಖರೀದಿ ಪತ್ರದ

ಜಮೀನುಗಳಿಗೂ ಇಂತಿಷ್ಟೇ ಅಂತರ ಇದೆ ಎಂದು ತೋರಿಸಲು ಯಾವುದೇ ದಾಖಲೆ ಹಾಜರುಪಡಿಸಿಲ್ಲ.

8) ಅರೇ ಮುರಾಳ ಗ್ರಾಮದಲ್ಲಿ ಸಾಕಷ್ಟು ಜಮೀನುಗಳು ಖರೀದಿಯಾಗಿರುತ್ತವೆ ಎಂದರೆ ಸರಿ. ನಾನು ಅರೇ ಮುರಾಳ ಗ್ರಾಮದ ಯಾವುದೇ ಖರೀದಿ ಪತ್ರಗಳನ್ನಾಗಲೀ ಅಥವಾ ಖರೀದಿ ಒಪ್ಪಂದ ಪತ್ರಗಳನ್ನಾಗಲೀ ಹಾಜರುಪಡಿಸಿಲ್ಲ ಎಂದರೆ ಸರಿ.

9) ನನ್ನ ಸಾಕ್ಷ್ಯ ಪ್ರಮಾಣ ಪತ್ರದ 7 ನೇ ಪ್ಯಾರಾದಲ್ಲಿ ತೋರಿಸಿದ ಜಮೀನುಗಳನ್ನು ವಾಣಿಜ್ಯ ಉದ್ದೇಶಕ್ಕಾಗಿ ಖರೀದಿಸಿರುತ್ತಾರೆ ಎಂದರೆ ಸರಿ. ನಾನು ಒಂದು ಎಕರೆಗೆ 60 ಲಕ್ಷ ಪರಿಹಾರ ಕೇಳಿದ್ದು, ಅದಕ್ಕೆ ಸೂಕ್ತ ದಾಖಲೆಗಳು ಇರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಜಮೀನಿಗೆ ಸರ್ಕಾರ ಸೂಕ್ತವಾದ ಬೆಲೆ ಕೊಟ್ಟಿದ್ದರು ಸಹ ಹೆಚ್ಚಿನ ಪರಿಹಾರ ಪಡೆಯಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯ ಮೇರೆಗೆ ಬೆರಳಚ್ಚು ಮಾಡಲಾಯಿತು.)
ಓ.ಹೇ.ಕೇ. ಸರಿ ಅದೆ.

3 ನೇ ಹೆಚ್ಚುವರಿ ಜಿಲ್ಲಾ ನ್ಯಾಯಾಧೀಶರು,
ವಿಜಯಪುರ.